Akashvani : Bangalore
National Bulletin In Kannada
07.09.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****

ಮುಖ್ಯಾಂಶಗಳು:

- ಇಂದು ಉತ್ತರಪ್ರದೇಶ ಹಾಗೂ ಮಧ್ಯಪ್ರದೇಶಕ್ಕೆ ಉಪರಾಷ್ಟ್ರಪತಿ ಒಂದು ದಿನದ ಭೇಟಿ; ಹಲವು ಕಾರ್ಯಕ್ರಮಗಳಲ್ಲಿ ಭಾಗಿ
- ದೇಶಾದ್ಯಂತ ಇಂದು ಗಣೇಶ ಚತುರ್ಥಿ ; ಜನತೆಗೆ ರಾಷ್ಟ್ರಪತಿ, ಉಪರಾಷ್ಟ್ರಪತಿ ಶುಭಾಶಯ
- ಮಧ್ಯಂತರ ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿ ಅಗ್ನಿ-೪ ಯಶಸ್ವಿ ಉಡಾವಣೆ
- ಪ್ಯಾರಿಸ್ ಪ್ಯಾರಾಲಿಂಪಿಕ್ಸ್ ಪುರುಷರ ಶಾಟ್‌ಪುಟ್‌ನಲ್ಲಿ ; ಭಾರತದ ಹೊಕಾಟೊ ಹೊಟೋಜೆ ಸೆಮಾಗೆ ಕಂಚಿನ ಪದಕ

**********

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಇಂದು ಉತ್ತರ ಪ್ರದೇಶದ ಗೋರಖ್‌ಪುರ ಹಾಗೂ ಮಧ್ಯಪ್ರದೇಶದ ಸತ್ನಾದಲ್ಲಿರುವ ಚಿತ್ರಕೂಟಕ್ಕೆ ಒಂದು ದಿನದ ಭೇಟಿ ನೀಡಲಿದ್ದಾರೆ. ಉಪರಾಷ್ಟ್ರಪತಿ ಅವರು ಉತ್ತರ ಪ್ರದೇಶದ ಗೋರಖ್‌ಪುರ ಜಿಲ್ಲೆಯಲ್ಲಿ ಹೊಸ ಸೈನಿಕ ಶಾಲೆ ಉದ್ಘಾಟಿಸಲಿದ್ದಾರೆ. ರಾಜ್ಯದ ಚಿತ್ರಕೂಟದಲ್ಲಿರುವ ಜಗದ್ಗುರು ರಾಮಭದ್ರಾಚಾರ್ಯ ದಿವ್ಯಾಂಗ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಿರುವ 'ಆಧುನಿಕ ಜೀವನದಲ್ಲಿ ಋಷಿ ಸಂಪ್ರದಾಯ' ಎಂಬ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮುಖ್ಯ ಅತಿಥಿಯಾಗಿ ಅವರು ಅಧ್ಯಕ್ಷತೆ ವಹಿಸುವರು. ಉಪರಾಷ್ಟ್ರಪತಿಗಳು ಮಧ್ಯಪ್ರದೇಶದ ಸತ್ನಾದ ಚಿತ್ರಕೂಟದಲ್ಲಿರುವ ದೀನದಯಾಳ್ ಸಂಶೋಧನಾ ಸಂಸ್ಥೆಯಲ್ಲಿ ನಾನಾಜಿ ದೇಶಮುಖ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಿದ್ದಾರೆ.

**********

ಗಣೇಶ ಚತುರ್ಥಿ ಹಬ್ಬವನ್ನು ದೇಶಾದ್ಯಂತ ಇಂದು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಈ ದಿನವು ಜ್ಞಾನ, ಸಮೃದ್ಧಿ ಹಾಗೂ ಅದೃಷ್ಟದ ಸಂಕೇತವಾದ ಭಗವಾನ್ ವಿನಾಯಕನ ಜನ್ಮವನ್ನು ಸೂಚಿಸುತ್ತದೆ. ವಿನಾಯಕ ಚತುರ್ಥಿ ಅಥವಾ ಗಣೇಶ ಉತ್ಸವ ಎಂದೂ ಕರೆಯಲ್ಪಡುವ ಈ ದಿನವು ಹತ್ತು ದಿನಗಳ ಕಾಲ ನಡೆಯುವ ಉತ್ಸವದ ಆರಂಭವನ್ನು ಸೂಚಿಸುತ್ತದೆ, ಈ ಸಮಯದಲ್ಲಿ ಜನರು ತಮ್ಮ ಮನೆಗಳಲ್ಲಿ ಮಣ್ಣಿನ ಗಣೇಶ ಮೂರ್ತಿಗಳನ್ನು ಇಟ್ಟು ಪೂಜಿಸುತ್ತಾರೆ. ಗಣೇಶನ ಮೂರ್ತಿಗಳ ವಿಸರ್ಜನೆಯ ಭವ್ಯವಾದ ಕಾರ್ಯಕ್ರಮದೊಂದಿಗೆ ಉತ್ಸವ ಮುಕ್ತಾಯಗೊಳ್ಳುತ್ತದೆ. ಅಂದು ಗಣೇಶನ ಮಣ್ಣಿನ ವಿಗ್ರಹಗಳನ್ನು ಜಲಮೂಲಗಳಲ್ಲಿ ವಿಸರ್ಜಿಸಲಾಗುತ್ತದೆ.

ಇದು ಸೃಷ್ಟಿ ಹಾಗೂ ವಿಸರ್ಜನೆಯ ಚಕ್ರವನ್ನು ಸಂಕೇತಿಸುತ್ತದೆ."ಗಣಪತಿ ಬಪ್ಪಾ ಮೋರಿಯಾ", ಭಜನೆಗಳು ಹಾಗೂ ನೃತ್ಯಗಳ ಜೊತೆಯಲ್ಲಿ ಗಣೇಶ ಮೂರ್ತಿಗಳನ್ನು ಮನೆ ಹಾಗೂ ಪಂಡಲ್‌ಗಳಿಂದ ನದಿಗಳು, ಕೆರೆಗಳು ಅಥವಾ ಸಮುದ್ರಕ್ಕೆ ಭವ್ಯವಾದ ಮೆರವಣಿಗೆಯಲ್ಲಿ ಒಯ್ಯಲಾಗುತ್ತದೆ. ಗಣೇಶ ಚತುರ್ಥಿ ಮಹಾರಾಷ್ಟ್ರದ ಪ್ರಮುಖ ಆಕರ್ಷಣೆಯಾಗಿದ್ದು, ಅಲ್ಲಿ ಜನರು ಹಬ್ಬವನ್ನು ಹೆಚ್ಚಿನ ಉತ್ಸಾಹದಿಂದ ಆಚರಿಸುತ್ತಾರೆ.

**********

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಗಣೇಶ ಚತುರ್ಥಿಯ ಸಂದರ್ಭದಲ್ಲಿ ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಸಂತೋಷ ಮತ್ತು ಉತ್ಸಾಹದ ಈ ಹಬ್ಬವು ಸಾಮಾಜಿಕ ಸಾಮರಸ್ಯ ಮತ್ತು ಸಹೋದರತ್ವದ ಸಂದೇಶವನ್ನು ನೀಡುತ್ತದೆ ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಗಣೇಶ ಜ್ಞಾನ, ಬುದ್ಧಿವಂತಿಕೆ ಹಾಗೂ ಸಮೃದ್ಧಿಯ ಸಂಕೇತವಾಗಿದ್ದು, ಹಬ್ಬವು ವಿನಮ್ರ ಹಾಗೂ ಕರ್ತವ್ಯಶೀಲರಾಗಿರಲು ಪ್ರೇರೇಪಿಸುತ್ತದೆ ಮತ್ತು ಸಾಮಾಜಿಕ ಒಗ್ಗಟ್ಟನ್ನು ಉತ್ತೇಜಿಸುತ್ತದೆ ಎಂದು ರಾಷ್ಟ್ರಪತಿ ತಿಳಿಸಿದ್ದಾರೆ. ಶಾಂತಿಯುತ ಹಾಗೂ ಸಮೃದ್ಧ ಭಾರತವನ್ನು ಸಾಮೂಹಿಕವಾಗಿ ನಿರ್ಮಿಸಲು ಈ ಸಂದರ್ಭದಲ್ಲಿ ಪಣ ತೊಡುವಂತೆ ರಾಷ್ಟ್ರಪತಿಗಳು ಜನತೆಗೆ ಮನವಿ ಮಾಡಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನಕರ್ ತಮ್ಮ ಸಂದೇಶದಲ್ಲಿ, ಬುದ್ಧಿವಂತಿಕೆ, ಸಮೃದ್ಧಿ ಹಾಗೂ ಅದೃಷ್ಟದ ಸಾಕಾರ ಮೂರ್ತಿಯಾದ ಗಣೇಶ ಕೋಟ್ಯಾಂತರ ಜನರ ಹೃದಯದಲ್ಲಿ ವಿಶೇಷ ಸ್ಥಾನ ಪಡೆದಿದ್ದಾನೆ. ವಿಘ್ನವಿನಾಶಕನಾದ ಗಣೇಶನು ಧೈರ್ಯ, ಸಂಕಲ್ಪ ಹಾಗೂ ಸ್ಥೈರ್ಯದಿಂದ ಸವಾಲುಗಳನ್ನು ಜಯಿಸಲು ಪ್ರೇರೇಪಿಸುತ್ತಾನೆ ಎಂದು ಹೇಳಿದ್ದಾರೆ. ನಮ್ಮ ಸಾಮೂಹಿಕ ಪ್ರಯತ್ನದಲ್ಲಿ ಅಡೆತಡೆಗಳನ್ನು ನಿವಾರಿಸಲು ಗಣೇಶ ಹಬ್ಬದ ಈ ಸಂದರ್ಭದಲ್ಲಿ ಏಕತೆ, ಸಹೋದರತ್ವ ಹಾಗೂ ಬದ್ಧತೆಯ ಮನೋಭಾವ ಅಳವಡಿಸಿಕೊಳ್ಳುವಂತೆ ಉಪರಾಷ್ಟ್ರಪತಿಗಳು ದೇಶವಾಸಿಗಳನ್ನು ಕೇಳಿಕೊಂಡಿದ್ದಾರೆ.

**********

ನಿನ್ನೆ ನವದೆಹಲಿಯ ತಮ್ಮ ನಿವಾಸದಲ್ಲಿ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪಡೆದ ಶಿಕ್ಷಕರೊಂದಿಗೆ ಸಂವಾದ ನಡೆಸಿದ ಸಂದರ್ಭದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯ ಪರಿಣಾಮಗಳ ಕುರಿತು ಚರ್ಚಿಸಿದರು. ಶಿಕ್ಷಕರು ವಿವಿಧ ಭಾಷೆಗಳಲ್ಲಿ ವಿದ್ಯಾರ್ಥಿಗಳಿಗೆ ಸ್ಥಳೀಯ ಜಾನಪದ ಸಂಸ್ಕೃತಿಯನ್ನು ಕಲಿಸಬಹುದು. ಇದರಿಂದ ವಿದ್ಯಾರ್ಥಿಗಳು ಬಹು ಭಾಷೆಗಳನ್ನು ಕಲಿಯುತ್ತಾರೆ ಎಂದು ಅವರು ಸಲಹೆ ನೀಡಿದರು. ಭಾರತದ ವೈವಿಧ್ಯತೆಯನ್ನು ಅನ್ವೇಷಿಸಲು ಶಿಕ್ಷಕರು ವಿದ್ಯಾರ್ಥಿಗಳನ್ನು ಶೈಕ್ಷಣಿಕ ಪ್ರವಾಸಗಳಿಗೆ ಕರೆದೊಯ್ಯಬಹುದು. ಇದು ಅವರ ಕಲಿಕೆಗೆ ಸಹಾಯ ಮಾಡುತ್ತದೆ ಮತ್ತು ಅವರು ದೇಶದ ಬಗ್ಗೆ ಸಮಗ್ರ ರೀತಿಯಲ್ಲಿ ತಿಳಿದುಕೊಳ್ಳಲು ಸಹಾಯ ಮಾಡುತ್ತದೆ.

ಜೊತೆಗೆ ಇದು ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಿದೆ ಮತ್ತು ಸ್ಥಳೀಯ ಆರ್ಥಿಕತೆಗೆ ಉತ್ತೇಜನ ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

**********

ಒಡಿಶಾದ ಚಂಡಿಪುರದ ಸಮಗ್ರ ಪರೀಕ್ಷಾ ವಲಯದಿಂದ ಮಧ್ಯಂತರ ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿ ಅಗ್ನಿ-೪ಅನ್ನು ಯಶಸ್ವಿಯಾಗಿ ಉಡಾವಣೆ ನಡೆಸಲಾಗಿದೆ. ಉಡಾವಣೆಯು ಎಲ್ಲಾ ಕಾರ್ಯಾಚರಣೆ ಹಾಗೂ ತಾಂತ್ರಿಕ ಗುರಿಗಳನ್ನು ಯಶಸ್ವಿಯಾಗಿ ತಲುಪಲಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ. ಈ ಉಡಾವಣೆಯು ಭಾರತದ ರಕ್ಷಣಾ ಸಾಮರ್ಥ್ಯಗಳನ್ನು ಬಲಪಡಿಸುವಲ್ಲಿ ಮತ್ತೊಂದು ಮೈಲುಗಲ್ಲು ಎಂದು ಗುರುತಿಸಲಾಗುತ್ತಿದೆ. ಕಳೆದ ವರ್ಷದ ಏಪ್ರಿಲ್‌ನಲ್ಲಿ ಒಡಿಶಾದ ಕರಾವಳಿಯ ಅಬ್ದುಲ್ ಕಲಾಂ ದ್ವೀಪದಿಂದ ಹೊಸ ತಲೆಮಾರಿನ ಪರಮಾಣು ಸಾಮರ್ಥ್ಯದ ಅಗ್ನಿ-ಪ್ರಧಾನ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಯಶಸ್ವಿಯಾಗಿ ಪರೀಕ್ಷೆ ನಡೆಸಲಾಗಿತ್ತು.

**********

ಬಿಹಾರದ ಎರಡು ದಿನಗಳ ಭೇಟಿಯಲ್ಲಿರುವ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಇಂದು ದರ್ಭಾಂಗ ಹಾಗೂ ಮುಜಾಫರ್‌ಪುರದಲ್ಲಿ ಎರಡು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಉದ್ಘಾಟಿಸಲಿದ್ದಾರೆ. ೫ ಸಾವಿರದ ೪೦೦ಕ್ಕೂ ಹೆಚ್ಚು ಹಾಸಿಗೆಗಳನ್ನು ಹೊಂದಿರುವ ವಿಶ್ವದ ಎರಡನೇ ಅತಿದೊಡ್ಡ ಆಸ್ಪತ್ರೆಯಾಗಿ ನಿರ್ಮಿಸಲಾಗುತ್ತಿರುವ ಪಾಟ್ನಾ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಯ ನಿರ್ಮಾಣ ಕಾಮಗಾರಿಯನ್ನು ಸಚಿವರು ಪರಿಶೀಲಿಸಲಿದ್ದಾರೆ. ಅಲ್ಲದೆ ಪಾಟ್ನಾದ ತಖ್ತ್ ಶ್ರೀಹರಿ ಮಂದಿರ್ ಸಾಹೇಬ್‌ಗೆ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಲಿದ್ದಾರೆ. ನಿನ್ನೆ ಸಂಜೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ನಡ್ಡಾ, ಪಾಟ್ನಾದಲ್ಲಿ ಪಕ್ಷದ ರಾಜ್ಯ ಘಟಕದ ಕೋರ್ ಕಮಿಟಿ ಸಭೆಯನ್ನು ನಡೆಸಿದರು. ರಾಜ್ಯದಲ್ಲಿ ಪಕ್ಷದ ಬಲವರ್ಧನೆ ಹಾಗೂ ಸದಸ್ಯತ್ವ ಅಭಿಯಾನದ ಪ್ರಗತಿಗೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಿದರು. ರಾಜ್ಯ ಬಿಜೆಪಿ ಮುಂದಿನ ಎರಡು ತಿಂಗಳಲ್ಲಿ ಒಂದು ಕೋಟಿ ಹೊಸ ಸದಸ್ಯರನ್ನು ಸೇರ್ಪಡೆಗೊಳಿಸುವ ಗುರಿ ಹೊಂದಿದೆ. ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಡಾ. ದಿಲೀಪ್ ಜೈಸ್ವಾಲ್ ಹಾಗೂ ಕೋರ್ ಕಮಿಟಿಯ ಇತರ ಸದಸ್ಯರು ಸಭೆಯಲ್ಲಿ ತಮ್ಮ ಸಲಹೆಗಳನ್ನು ನೀಡಿದರು.

**********

ಉದ್ಯಮ ಮತ್ತು ಕೈಗಾರಿಕಾ ವಲಯದಲ್ಲಿ ಸಕಲ ಸೌಲಭ್ಯ ಒದಗಿಸಲು ಹಾಗೂ ವಿವಿಧ ಹಂತಗಳಲ್ಲಿ ಮಂಜೂರಾತಿ ನೀಡಲು ರಾಷ್ಟ್ರೀಯ ಏಕಗವಾಕ್ಷಿ ಸ್ಥಾಪಿಸಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ವಿವಿಧ ರಾಜ್ಯಗಳ ಕೈಗಾರಿಕಾ ಸಚಿವರ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಕಾರ್ಖಾನೆ ಸ್ಥಾಪನೆಗೆ ಜಮೀನು

ಖರೀದಿಯಿಂದ, ತಯಾರಿಕೆ ಆರಂಭದವರೆಗಿನ ಎಲ್ಲ ಹಂತಗಳಲ್ಲಿ ವಿವಿಧ ಸೌಲಭ್ಯ ಒದಗಿಸಲು ರಾಷ್ಟ್ರೀಯ ಏಕಗವಾಕ್ಷಿ ಸ್ಥಾಪಿಸಲಾಗಿದೆ ಎಂದರು. ರಾಜ್ಯಗಳು ತಮ್ಮ ಕೈಗಾರಿಕಾ ಯೋಜನೆ ಮತ್ತು ಉದ್ಯಮ ನೀತಿಗಳನ್ನು ಈ ಏಕಗವಾಕ್ಷಿಯಲ್ಲಿ ಜೋಡಿಸಬಹುದಾಗಿದೆ. ವಿಕಸಿತ ಭಾರತ ಗುರಿಯನ್ನು ವೇಗವಾಗಿ ತಲುಪಲು ಸ್ಪರ್ಧೆ, ಸಮನ್ವಯ ಮತ್ತು ಸಹಕಾರ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯಗಳು ಕೇಂದ್ರದೊಂದಿಗೆ ಕೈಜೋಡಿಸಬೇಕು ಎಂದು ಸಚಿವ ಪಿಯೂಷ್ ಗೋಯಲ್ ಮನವಿ ಮಾಡಿದರು.

**********

ವಕ್ಫ್ ತಿದ್ದುಪಡಿ ವಿಧೇಯಕ-೨೦೨೪ರ ಜಂಟಿ ಸಮಿತಿಯ ಸಭೆ ನಿನ್ನೆ ನವದೆಹಲಿಯಲ್ಲಿ ನಡೆಯಿತು. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಜಕಾತ್ ಫೌಂಡೇಶನ್ ಆಫ್ ಇಂಡಿಯಾ ಮತ್ತು ತೆಲಂಗಾಣ ವಕ್ಫ್ ಮಂಡಳಿಯ ಪ್ರತಿನಿಧಿಗಳು, ಸಮಿತಿಯ ಮುಂದೆ ತಮ್ಮ ಅಭಿಪ್ರಾಯಗಳನ್ನು ಮತ್ತು ಸಲಹೆಗಳನ್ನು ಮಂಡಿಸಿದರು. ಲೋಕಸಭಾ ಸಂಸದ ಜಗದಾಂಬಿಕಾ ಪಾಲ್ ಅವರ ಅಧ್ಯಕ್ಷತೆಯಲ್ಲಿ ಈ ಸಮಿತಿಯನ್ನು ರಚಿಸಲಾಗಿದೆ. ೩೧ ಸದಸ್ಯರ ಸಮಿತಿಯು, ಲೋಕಸಭೆಯಿಂದ ೨೧ ಸದಸ್ಯರು ಮತ್ತು ರಾಜ್ಯಸಭೆಯಿಂದ ೧೦ ಸದಸ್ಯರನ್ನು ಒಳಗೊಂಡಿದೆ.

**********

ಹರಿಯಾಣ ರಾಜ್ಯ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ೩೧ ಉಮೇದುವಾರರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಪಕ್ಷದ ಹಿರಿಯ ನಾಯಕ ಹಾಗು ಮಾಜಿ ಮುಖ್ಯಮಂತ್ರಿ ಭೂಪಿಂದರ್ ಸಿಂಗ್ ಹೂಡಾ ಅವರು, ಗರ್ಹಿ ಸಂಪ್ಲಾ ಕಿಲೋಯ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಹೂಡೆಲ್ ಕ್ಷೇತ್ರದಿಂದ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಉದಯ್‌ಭಾನ್ ಅವರನ್ನು ಕಣಕ್ಕಿಳಿಸಲಾಗಿದೆ. ನಿನ್ನೆ ಕಾಂಗ್ರೆಸ್ ಸೇರಿದ ಕುಸ್ತಿಪಟು ವಿನೇಶ್ ಫೋಗಟ್ ಅವರಿಗೆ ಜುಲಾನಾ ಕ್ಷೇತ್ರದಿಂದ ಟಿಕೆಟ್ ನೀಡಲಾಗಿದೆ. ರಾಜ್ಯದ ಮಾಜಿ ಸಚಿವೆ ಗೀತಾ ಭುಕ್ಕಲ್, ಜಜ್ಜರ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ರೇವಾರಿ ಕ್ಷೇತ್ರದಿಂದ ಹಾಲಿ ಶಾಸಕ ಚಿರಂಜೀವಿ ರಾವ್ ಅವರಿಗೆ ಮತ್ತೆ ಟಿಕೆಟ್ ನೀಡಲಾಗಿದೆ. ಹರಿಯಾಣ ವಿಧಾನಸಭೆಯ ಎಲ್ಲಾ ೯೦ ಕ್ಷೇತ್ರಗಳಿಗೆ ಅಕ್ಟೋಬರ್ ೫ ರಂದು ಮತದಾನ ನಡೆಯಲಿದೆ.

**********

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದ ಪುರುಷರ ಹೈಜಂಪ್ ಟಿ೬೪ ವಿಭಾಗದ ಫೈನಲ್‌ನಲ್ಲಿ ಭಾರತದ ಪ್ರವೀಣ್ ಕುಮಾರ್ ಚಿನ್ನದ ಪದಕ ಗೆದ್ದಿದ್ದಾರೆ. ೨.೦೮ ಮೀಟರ್ ಎತ್ತರ ಜಿಗಿಯುವ ಮೂಲಕ ಅವರು ಹೊಸ ದಾಖಲೆ ಬರೆದಿದ್ದಾರೆ. ಪುರುಷರ ಶಾಟ್‌ಪುಟ್ ಎಫ್-೫೭ ಫೈನಲ್‌ನಲ್ಲಿ ಹೊಕಾಟೊ ಹೊಟೋಜೆ ಸೆಮಾ ಅವರು ಕಂಚಿನ ಪದಕ ಗೆದ್ದಿದ್ದಾರೆ. ಈ ಮೂಲಕ ಭಾರತದ ಪದಕಗಳ ಸಂಖ್ಯೆ ೨೭ಕ್ಕೆ ಏರಿಕೆಯಾಗಿದ್ದು, ೬ ಚಿನ್ನ, ೯ ಬೆಳ್ಳಿ ಮತ್ತು ೧೨ ಕಂಚಿನ ಪದಕಗಳನ್ನು ಇದು ಒಳಗೊಂಡಿದೆ.

ಚಿನ್ನದ ಪದಕ ವಿಜೇತ ಪ್ರವೀಣ್ ಕುಮಾರ್ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನಕರ್, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಅಭಿನಂದಿಸಿದ್ದಾರೆ. ಹತ್ತನೇ ದಿನವಾದ ಇಂದು ಭಾರತೀಯ ಅಥ್ಲೀಟ್‌ಗಳು ಈಜು, ಸೈಕ್ಲಿಂಗ್, ಕ್ಯಾನೋ ಮತ್ತು ಇನ್ನಿತರ ವಿಭಾಗಗಳಲ್ಲಿ ಆಡಲಿದ್ದಾರೆ. ಸೈಕ್ಲಿಂಗ್‌ನಲ್ಲಿ ಜ್ಯೋತಿ ಗಡೇರಿಯಾ, ಮಹಿಳೆಯರ ಸಿ೧-೩ನ ರೋಡ್ ರೇಸ್‌ನ ಫೈನಲ್‌ನಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ಯಾರಾ ಕ್ಯಾನೋದಲ್ಲಿ ಪ್ರಾಚಿ ಯಾದವ್, ಮಹಿಳೆಯರ ಸಿಂಗಲ್ ೨೦೦ ಮೀಟರ್ ಸೆಮಿಫೈನಲ್‌ನಲ್ಲಿ ಪಾಲ್ಗೊಳ್ಳಲಿದ್ದಾರೆ. ನವದೀಪ್ ಪುರುಷರ ಜಾವಲಿನ್ ಥ್ರೋ ಎಫ್-೪೧ ಫೈನಲ್‌ನಲ್ಲಿ ಪಾಲ್ಗೊಳ್ಳಲಿದ್ದಾರೆ. ಸಿಮ್ರಾನ್ ಮಹಿಳೆಯರ ೨೦೦ ಮೀಟರ್ ಟಿ-೧೨ರ ಫೈನಲ್‌ನಲ್ಲಿ ಪದಕವನ್ನು ಗುರಿಯಾಗಿಸಿಕೊಂಡಿದ್ದಾರೆ.

**********

ಸ್ಪೇನ್‌ನ ಪಾಂಟೆವೆಡ್ರಾದಲ್ಲಿ ನಡೆಯುತ್ತಿರುವ ಯು-೨೦ ಮಹಿಳೆಯರ ವಿಶ್ವ ಚಾಂಪಿಯನ್ ಶಿಪ್ ಕುಸ್ತಿ ಸ್ಪರ್ಧೆಯಲ್ಲಿ ಭಾರತದ ನಿತಿಕಾ ೬೨ ಕೆ.ಜಿ. ಫ್ರೀಸ್ಟೈಲ್ ವಿಭಾಗದಲ್ಲಿ ಬೆಳ್ಳಿ ಪದಕ ಮುಡಿಗೇರಿಸಿಕೊಂಡಿದ್ದಾರೆ.

**********